## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 554(689)

ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇ ಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 14.12.2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಪ್ರೌಢಶಾಲೆಯ ವಿಭಾಗಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ೪೦:೦೧ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:</td><td>ಬಂದಿದೆ.</td></tr>
<tr><td>ಆ</td><td>ಹಾಗಿದ್ದಲ್ಲಿ, ಗುಣಾತ್ಮಕ ಶಿಕ್ಷಣಕ್ಕಾಗಿ ನವೋದಯ, ಮೊರಾರ್ಜಿ ವಸತಿ ಶಾಲೆಗಳಲ್ಲಿ ಇರುವಂತೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ೪೦:೦೧ರ ಅನುಪಾತದಲ್ಲಿ ಶಿಕ್ಷಕರ ನೇಮಕಾತಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ:</td><td>• ಸರ್ಕಾರದ ಆದೇಶ ಸಂಖ್ಯೆ:ಇಡಿ 69 ಎಲ್‌ಬಿಪಿ 2011 ದಿನಾಂಕ:01.04.2011ರನ್ವಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಸಿಬ್ಬಂದಿ ಸ್ಥಿರ ವಿನ್ಯಾಸವನ್ನು ರಚಿಸಲಾಗಿದ್ದು, ಈ ಕೆಳಗಿನಂತೆ ವಿಭಾಗಗಳನ್ನು ರಚಿಸಲಾಗಿದೆ.<br><table><tr><th>ಕ್ರ.ಸಂ</th><th>ವಿದ್ಯಾರ್ಥಿಗಳ ಸಂಖ್ಯೆ</th><th>ಪರಿಗಣಿಸಬೇಕಾದ ವಿಭಾಗ</th></tr><tr><td>1</td><td>70 ರವರೆಗೆ</td><td>1 ವಿಭಾಗ</td></tr><tr><td>2</td><td>71-140</td><td>2 ವಿಭಾಗ</td></tr><tr><td>3</td><td>141-210</td><td>3 ವಿಭಾಗ</td></tr><tr><td>4</td><td>211-280</td><td>4 ವಿಭಾಗ</td></tr><tr><td>5</td><td>281-350</td><td>5 ವಿಭಾಗ</td></tr></table><br>• ಅನುದಾನಿತ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಅನುಪಾತವನ್ನು ಶಿಕ್ಷಣ ಕಾಯ್ದೆ ನಿಯಮಗಳು ಮತ್ತು ಸಿಬ್ಬಂದಿ ರಚನಾ ವಿನ್ಯಾಸದ ಪ್ರಕಾರ ಪ್ರತಿ ಅನುದಾನಿತ ಶಾಲೆಗೆ 7+1 ಬೋಧಕ ಹುದ್ದೆಗಳನ್ನು ನಿಗಧಿಪಡಿಸಲಾಗಿದೆ. 5 ವಿಭಾಗಗಳಿಗಿಂತ ಹೆಚ್ಚು ವಿಭಾಗಗಳನ್ನು ಹೊಂದಿರುವ ಶಾಲೆಗಳಿಗೆ ಶಿಕ್ಷಕರ ಅನುಪಾತ 1.5 ಅನುಪಾತದಲ್ಲಿ ಶಿಕ್ಷಕರನ್ನು ನೀಡಲಾಗುತ್ತದೆ.</td></tr>
<tr><td>ಇ</td><td>ಯಾವ ಕಾಲಮಿತಿಯಲ್ಲಿ ಸದರಿ ಅನುಪಾತದ ಪ್ರಕಾರ ಶಿಕ್ಷಕರ ನೇಮಕಾತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ?</td><td>ಕೋವಿಡ್-19 ಮಹಾಮಾರಿಯಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020,ದಿ:10/6/2020ರನ್ವಯ ಆರ್ಥಿಕ ಮಿತವ್ಯಯ ಹೇರಲಾಗಿದೆ. ಇದಲ್ಲದೆ ಆರ್ಥಿಕ ಇಲಾಖೆಯ ಸುತ್ತೋಲೆ ಸಂ: ಆಇ 03 ಬಿಇಎಂ 2020,ದಿ:6/7/2020ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು & ಬ್ಯಾಕ್ ಲಾಗ್</td></tr>
</table>

| | | |
|---|---|---|
| | | ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ರಾಜ್ಯದಲ್ಲಿ ಮಾರ್ಚ್-2020ರಿಂದ ಇಲ್ಲಿಯವರೆಗೂ ಕೋವಿಡ್-19 ಹತೋಟಿಗೆ ಬರದೆ ದಿನದಿಂದ ದಿನಕ್ಕೆ ತೀವ್ರ ಸ್ವರೂಪದಲ್ಲಿ ಏರಿಕೆಯಾಗಿತ್ತಿರುವುದರಿಂದ ರಾಜ್ಯದ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿದೆ. ಈ ಪರಿಸ್ಥಿತಿ ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢಿಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಅವಶ್ಯಕತೆಯಿರುವುದರಿಂದ ಕಾಲಮಿತಿ ನಿಗಧಿಪಡಿಸಲು ಸಾಧ್ಯವಾಗಿರುವುದಿಲ್ಲ. |

ಸಂಖ್ಯೆ: ಇಪಿ 295 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು